ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ನೀರಾವರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 25/5/2020

# ನೂರು ದಿನದಲ್ಲಿ ಹತ್ತು ಸಾಧನೆ

ಬೆಂಗಳೂರು: ರಾಜ್ಯ ಸರ್ಕಾರದಲ್ಲಿ ಜಲ ಸಂಪನ್ಮೂಲ ಸಚಿವರಾಗಿ ನೂರು ದಿನ ಪೂರೈಸಿರುವ ಹಿನ್ನೆಲೆಯಲ್ಲಿ ತಾವು ಸಾಧಿಸಿರುವ ಪ್ರಮುಖ ಹತ್ತು ಸಾಧನೆಗಳ ಬಗ್ಗೆ ಸಚಿವ ರಮೇಶ್ ಜಾರಕಿಹೊಳಿ ಮಾಧ್ಯಮಗಳಿಗೆ ಬಿಡುಗಡೆ ಮಾಡಿದ್ದಾರೆ.



ಪ್ರಮುಖವಾಗಿ ಮಹದಾಯಿ ಕುಡಿಯುವ ನೀರಿನ ಯೋಜನೆಗೆ ಕೇಂದ್ರ ಸರ್ಕಾರದಿಂದ ಅನುಮೋದನೆ; ಹೂಳು ತುಂಬಿರುವ ತುಂಗಭದ್ರಾ ಅಣೆಕಟ್ಟೆಗೆ ಸಮಾನಾಂತರವಾಗಿ ನವಲಿ ಎಂಬಲ್ಲಿ ಜಲಾಶಯ ನಿರ್ಮಿಸಲು ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲು ಆಡಳಿತಾತ್ಮಕ ಅನುಮೋದನೆ ನೀಡಿರುವುದು; ಎತ್ತಿನಹೊಳೆ ಯೋಜನೆಯ ಮೊದಲ ಹಂತ ಮುಂದಿನ ಮಳೆಗಾಲ ಆರಂಭದೊಳಗೆ ಪೂರ್ಣ ಭೂಸ್ವಾಧೀನಕ್ಕಾಗಿ 100 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿರುವುದು ಸಾಧನೆಗಳಲ್ಲಿ ಸೇರಿದೆ ಎಂದು ಪ್ರಕಟಣೆ ತಿಳಿಸಿದೆ.

ಭದ್ರಾ ಮೇಲ್ದಂಡೆ ಯೋಜನೆಗೆ 2021 ರ ಮಳೆಗಾಲದ ಒಳಗೆ 60 ಕಿ.ಮೀ. ವರೆಗೆ ಪ್ರಾಯೋಗಿಕವಾಗಿ ಚಾಲನೆ ನೀಡಿ ಹಂತಹಂತವಾಗಿ ಯೋಜನೆ ಸಂಪೂರ್ಣಗೊಳಿಸುವ ಸಂಕಲ್ಪ ಮಾಡಲಾಗಿದೆ; ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಜಲಾಶಯದ ಅಣೆಕಟ್ಟು ಎತ್ತರಿಸಲು ನ್ಯಾಯಾಧಿಕರಣದಿಂದ ಆದೇಶವಾಗುವಂತೆ ಪ್ರಯತ್ನಿಸಲಾಗಿದೆ. ತಿಲ್ಲದೆ, ಭೂಸ್ವಾಧೀನಕ್ಕಾಗಿ ಏಕರೂಪದ ದರ ನಿಗದಿ ಮಾಡಲಾಗಿದೆ.

ವಾಣಿವಿಲಾಸ ಸಾಗರದಿಂದ ಚಿತ್ರದುರ್ಗ ಜಿಲ್ಲೆಯ ಕೆರೆಗಳ ತುಂಬಿಸಲು ಕ್ರಮ ಕೈಗೊಳ್ಳಲಾಗಿದೆ. ಇಲಾಖೆಯಲ್ಲಿ ಯೋಜನೆಗಳಿಗಾಗಿ ಮಾಡುತ್ತಿದ್ದ ವೆಚ್ಚದಲ್ಲಿ ಶಿಸ್ತು ತರುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದ್ದು ಈ ಮೂಲಕ ಹಣ ಪೋಲಾಗುವುದನ್ನು ತಡೆಯಲಾಗುತ್ತಿದೆ.

ಸೂಕ್ಷ್ಮ ನೀರಾವರಿ ಮತ್ತು ಪಂಪ್ಸ್ ಮೋಟಾರ್‌ಗಳ ನಿರ್ವಹಣೆಗಾಗಿ ಹೊಸ ನೀತಿ ಜಾರಿ ಹಾಗೂ ಸಾಮರ್ಥ್ಯವುಳ್ಳ ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.